# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

| | |
|---|---|
| | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ,<br>ಬಿ.ಟಿ.ಎಂ.ಲೇಔಟ್ ಉಪ ವಿಭಾಗ,<br>16ನೇ ಮುಖ್ಯರಸ್ತೆ, ಬಿ.ಟಿ.ಎಂ.1ನೇ ಹಂತ,<br>ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,<br>ಬೆಂಗಳೂರು-29. ದಿನಾಂಕ: 18.02.2021 |

## ವಾರ್ಡ್ ಸಮಿತಿ ಸಭೆಯ ಸೂಚನಾ ಪತ್ರ

ವಿಷಯ:- ವಾರ್ಡ್ ಸಮಿತಿ ಸಭೆಯನ್ನು ನಡೆಸುವ ಬಗ್ಗೆ

ಉಲ್ಲೇಖ:1) ಘನ ಉಚ್ಚ ನ್ಯಾಯಾಲಯದ ಆದೇಶ ಸಂಖ್ಯೆ: ಡಬ್ಲೂಪಿ 24739/2012, ದಿನಾಂಕ: 10.11.2017

2) ಕೇಂದ್ರ ಕಛೇರಿ ಆದೇಶ ಸಂಖ್ಯೆ: ಬಿ12(5)/ಪಿಆರ್/35/2020-21, ದಿನಾಂಕ: 21.09.2020

11:00 AM 20/02/2021

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಆದೇಶಗಳಂತೆ ಪ್ರತಿ ಮಾಹೆಯ 1ನೇ ಮತ್ತು 3ನೇ ಶನಿವಾರ ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಬೇಕಾಗಿದ್ದು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ದಕ್ಷಿಣವಲಯದ ವಾರ್ಡ್ ಸಂಖ್ಯೆ:176 ಬಿ.ಟಿ.ಎಂ ಲೇಔಟ್, 9ನೇ ಮುಖ್ಯರಸ್ತೆಯ ಬಿ.ಟಿ.ಎಂ 2ನೇ ಹಂತದ ಕೆಂಪೇಗೌಡ ಆಟದ ಮೈದಾನದಲ್ಲಿರುವ ಬಿ.ಬಿ.ಎಂ.ಪಿ ಕಛೇರಿಯಲ್ಲಿ ಸಭೆಯನ್ನು ದಿನಾಂಕ: 20.02.2021ರ ಬೆಳಿಗ್ಗೆ 11:00 ಗಂಟೆಗೆ ನಿಗಧಿಪಡಿಸಲಾಗಿದ್ದು, ವಾರ್ಡ್ ಸಮಿತಿ ಸದಸ್ಯರು ಹಾಗೂ ವಾರ್ಡ್ ಸಂಖ್ಯೆ 176 ಬಿ.ಟಿ.ಎಂ ಲೇಔಟ್‌ಗೆ ಸಂಬಂಧಿಸಿದ ಅಧಿಕಾರಿಗಳು ಸಭೆಗೆ ತಪ್ಪದೇ ಹಾಜರಾಗಲು ಈ ಮೂಲಕ ಕೋರುತ್ತೇನೆ.

**:ಸಭಾ ಅಜೆಂಡಾ:**

| | |
|---|---|
| 1) | ಹಿಂದಿನ ಸಭೆಯ ನಡುವಳಿಗಳನ್ನು ಓದಿ ರೆಕಾರ್ಡ್ ಮಾಡುವುದು |
| 2) | ಕೋವಿಡ್-19 ರ ಬಗ್ಗೆ ಚರ್ಚಿಸುವುದು |
| 3) | ವಾರ್ಡ್ ವ್ಯಾಪ್ತಿಯಲ್ಲಿನ ಘನತ್ಯಾಜ್ಯ ನಿರ್ವಹಣೆ ಬಗ್ಗೆ ಚರ್ಚಿಸುವ ವಿಚಾರ |
| 4) | ವಾರ್ಡ್ ವ್ಯಾಪ್ತಿಯಲ್ಲಿನ ಕಾಮಗಾರಿಗಳು ಮತ್ತು ರಸ್ತೆ ಗುಂಡಿಗಳ ದುರಸ್ಥಿಪಡಿಸುವ ಬಗ್ಗೆ |
| 5) | ಮಾನ್ಯ ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸಬಹುದಾದ ಇತರೆ ವಿಷಯಗಳ ಬಗ್ಗೆ ಚರ್ಚೆ |

18/2/2021

ಕಾರ್ಯದರ್ಶಿಗಳು,
ವಾರ್ಡ್ ಸಂಖ್ಯೆ:176, ಬಿ.ಟಿ.ಎಂ ಲೇಔಟ್
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

ರವರಿಗೆ :-

1) ಸಹಾಯಕ ಕಾರ್ಯಪಾಲಕ ಅಭಿಯಂತರರು(ಬಿಟಿಎಂ)ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
2) ಸಹಾಯಕ ಕಾರ್ಯಪಾಲಕ ಅಭಿಯಂತರರು(ಘ.ತ್ಯಾ.ನಿ.ಅ.ಬಿಟಿಎಂ)ವಿಭಾಗ ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
3) ಸಹಾಯಕ ಕಾರ್ಯಪಾಲಕ ಅಭಿಯಂತರರು ಬೆಸ್ಕಾಂ ಉಪ ವಿಭಾಗ ಎಸ್-16 ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
4) ಸಹಾಯಕ ಕಾರ್ಯಪಾಲಕ ಅಭಿಯಂತರರು ಉಪ ವಿಭಾಗ ಎಸ್-6 ಬೆಂಗಳೂರು ನೀರುಸರಬರಾಜು ಮಂಡಳಿ ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
5) ತೋಟಗಾರಿಕೆ ಅಧೀಕ್ಷಕರು (ದಕ್ಷಿಣ) ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
6) ಆರೋಗ್ಯ ವೈದ್ಯಾಧಿಕಾರಿಗಳು ಬಿ.ಟಿ.ಎಂ ಲೇಔಟ್ ವಿಭಾಗದವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
7) ಸಹಾಯಕ ಕಂದಾಯ ಅಧಿಕಾರಿಗಳು ಬಿ.ಟಿ.ಎಂ ಉಪ ವಿಭಾಗ ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
8) ಸಹಾಯಕ ಕಾರ್ಯಪಾಲಕ ಅಭಿಯಂತರರು ವಿದ್ಯುತ್ ಉಪವಿಭಾಗ ದಕ್ಷಿಣ ವಲಯ ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
9) ಆರಕ್ಷಕ ಉಪನಿರೀಕ್ಷಕರು ಮೈಕೋ ಲೇಔಟ್ ಪೋಲೀಸ್ ಠಾಣೆ ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
10) ಆರಕ್ಷಕ ಉಪನಿರೀಕ್ಷಕರು ಸಂಚಾರಿ ಪೋಲೀಸ್ ಠಾಣೆ ಮೈಕೋ ಲೇಔಟ್ ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.

Scanned with CamScanner

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಬಿ.ಟಿ.ಎಂ ಲೇಔಟ್ ಉಪ-ವಿಭಾಗದ ವಾರ್ಡ್ ಸಂಖ್ಯೆ-176 ಬಿ.ಟಿ.ಎಂ ಬಡಾವಣೆ ಕಛೇರಿಯಲ್ಲಿ ದಿನಾಂಕ: 20.02.2021 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ಪರಿಣಾಮಕಾರಿಯಾಗಿ ಸೇವೆಗಳನ್ನು ಒದಗಿಸುವ ನಿಟ್ಟಿನಲ್ಲಿ ಪಾಲಿಕೆಯ ವಾರ್ಡ್ ಹಂತದಲ್ಲಿ ಸಮಿತಿಗಳನ್ನು ರಚಿಸುವ ಸಲುವಾಗಿ ಮಾನ್ಯ ಆಯುಕ್ತರು, ಬಿ.ಬಿ.ಬಿ.ಎಂ.,ರವರ ಕಛೇರಿ ಆದೇಶದ ಸಂಖ್ಯೆ:ಬಿ12(5)/ಪಿಆರ್/35/2020-21/21-09-2020ರ ಆದೇಶದಂತೆ ನೋಡೆಲ್ ಅಧಿಕಾರಿಯನ್ನಾಗಿ ಶ್ರೀ.ವೆಂಕಟೇಶ್.ಎಸ್, ಐ.ಆರ್.ಎಸ್, ಜಂಟಿ ಆಯುಕ್ತರು, ಹಣಕಾಸು, ಬಿ.ಬಿ.ಎಂಪಿ.ರವನ್ನು ನೇಮಿಸಲಾಗಿದ್ದು, ಸದರಿ ಆದೇಶದಂತೆ ವಾರ್ಡ್ ಮಟ್ಟದಲ್ಲಿ ಸಾರ್ವಜನಿಕರಿಗೆ ಪ್ರಮುಖವಾದ ಮೂಲಭೂತ ಸೌಕರ್ಯಗಳಾದ ಘನತ್ಯಾಜ್ಯ ವಸ್ತುಗಳ ನಿರ್ವಹಣೆ, ಸಾರ್ವಜನಿಕ ಆರೋಗ್ಯ, ಶಿಕ್ಷಣ, ನಗರದ ಸ್ವಚ್ಛತೆ, ರಸ್ತೆ ನಿರ್ವಹಣೆ/ನಿರ್ಮಾಣ, ಬೀದಿ ದೀಪಗಳ ನಿರ್ವಹಣೆ, ನೀರು ಸರಬರಾಜು ಮತ್ತು ಒಳಚರಂಡಿ ಮತ್ತು ಇನ್ನಿತರ ಕಲ್ಯಾಣ ಕಾರ್ಯಕ್ರಮಗಳಂತಹ ಹಲವಾರು ಸೌಲಭ್ಯಗಳನ್ನು ಪರಿಣಾಮಕಾರಿಯಾಗಿ ಒದಗಿಸುವ ನಿಟ್ಟಿನಲ್ಲಿ ಮತ್ತು ಪಾಲಿಕೆಯ ಹಾಗೂ ಸಾರ್ವಜನಿಕರ ನಡುವೆ ಸಮನ್ವಯ ಸಾಧಿಸುವ ನಿಟ್ಟಿನಲ್ಲಿ ಪಾಲಿಕೆಯ ವಾರ್ಡ್ ಹಂತದಲ್ಲಿ ಸಮಿತಿ ಸಭೆಗೆ ಈ ಕೆಳಕಂಡ ಅಧಿಕಾರಿ ವರ್ಗ/ ಸದಸ್ಯರು ಮತ್ತು ಸ್ಥಳೀಯ ನಾಗರೀಕರು ಹಾಜರಾಗಿದ್ದರು.

**ಸಭೆಗೆ ಹಾಜರಿದ್ದ ಅಧಿಕಾರಿ/ಸದಸ್ಯರುಗಳ ವಿವರ**

| ಕ್ರ.ಸಂ. | ಹೆಸರು | ಮೊಬೈಲ್ ಸಂಖ್ಯೆ |
|---|---|---|
| 1 | ಶ್ರೀ.ವೆಂಕಟೇಶ್.ಎಸ್, ಜಂಟಿ ಆಯುಕ್ತರು, ಹಣಕಾಸು ಬಿ.ಬಿ.ಎಂ..ಪಿ. | 9480685634 |
| 2 | ಶ್ರೀ.ನರೇಶ್‌ಕುಮಾರ್.ಕೆ ಸ.ಇಂ-176 ವಾರ್ಡ್ | 9844407499 |
| 3 | ಶ್ರೀ. ಪ್ರಹ್ಲಾದ್,ಕಿರಿಯ ಆರೋಗ್ಯ ಪರಿವೀಕ್ಷಕರು | 9972320005 |
| 4 | ಶ್ರೀ. ಮಲ್ಲಿಕಾರ್ಜುನ ಹಿರಿಯ ಆರೋಗ್ಯ ಪರಿವೀಕ್ಷಕರು | 9480685601 |
| 5 | ಶ್ರೀ. ಮುನಿರಾಜು ಸ್ಯಾನಿಟರಿ ದಫೇದಾರ | 9844884555 |
| 6 | ಶ್ರೀ ರಘುನಾತ್.ಜಿ ಕಂದಾಯ ಪರಿವೀಕ್ಷಕರು | 9739792444 |
| 7 | ಶ್ರೀ.ಗೋಪಾಲಕೃಷ್ಣ ಅಧ್ಯಕ್ಷರು ಕುವೆಂಪು ನಾಗರೀಕ ವೇದಿಕೆ | 9900111391 |
| 8 | ಶ್ರೀ ಸತೀಶ್ ಜಾಧವ್ ಸನ್‌ಶೈನ್ ಕಾಲೋನಿ | 9845526538 |
| 9 | ಶ್ರೀಮತಿ ಮಂಜುಳ ಶ್ರೀಧರ್ 15ನೇ ಮೈನ್ | - |
| 10 | ಶ್ರೀ ಸಿದ್ದಪ್ಪ | 9448711268 |

* * * * * *

ದಿನಾಂಕ-20-02-2021ರಂದು ಬೆಳಿಗ್ಗೆ 11.00 ಗಂಟೆಗೆ ನಡೆಸಲಾದ ವಾರ್ಡ್ ಮಟ್ಟದ ಸಾರ್ವಜನಿಕರ ಕುಂದು ಕೊರತೆಗಳನ್ನು ನಿವಾರಿಸುವ ನಿಟ್ಟಿನಲ್ಲಿ ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ನಿರ್ವಹಿಸುವ ಸಂಬಂಧ ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲಾಗಿ ಮೊದಲಿಗೆ ಹಾಜರಿದ್ದ, ಅದ್ಯಕ್ಷರಿಗೆ ಸ್ವಾಗತವನ್ನು ಕೋರುತ್ತಾ ಹಾಗೂ ಸಭೆಗೆ ಹಾಜರಾದ ಎಲ್ಲಾ ಇಲಾಖೆಯ ಅಧಿಕಾರಿ ವರ್ಗದವರಿಗೆ ಮತ್ತು ಸ್ಥಳೀಯ ನಾಗರಿಕರಿಗೆ ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

ಸಭೆಯನ್ನು ಪ್ರಾರಂಭಿಸುತ್ತಾ, ಸದರಿ ವಾರ್ಡ್‌ನ ಎಲ್ಲಾ ಕುಂದುಕೊರತೆಗಳನ್ನು ಇಲಾಖೆವಾರು ಚರ್ಚಿಸಿ ಬಗೆಹರಿಸಿಕೊಳ್ಳಲು ಅಧ್ಯಕ್ಷರು ಸಲಹೆಯನ್ನು ನೀಡಿರುತ್ತಾರೆ. ಈ ಕುರಿತಂತೆ ಈ ಕೆಳಕಂಡ ವಿಷಯಗಳನ್ನು ಸಂಕ್ಷಿಪ್ತವಾಗಿ ಚರ್ಚಿಸಿ ಪರಿಹರಿಸುವ ಬಗ್ಗೆ ಕೈಗೊಳ್ಳುವ ಕ್ರಮಗಳ ಬಗ್ಗೆ ಅಧಿಕಾರಿಗಳಿಗೆ ನಿರ್ದೇಶನವನ್ನು ನೀಡಲಾಯಿತು.

**2021-22ನೇ ಸಾಲಿನ ಅಯವ್ಯಯದಲ್ಲಿ ಸಾರ್ವಜನಿಕ ಶೌಚಲಯದ ನವೀಕರಣ, ಹೊಸ ಶೌಚಲಯ ಮತ್ತು ಪಾದಚಾರಿ ಮಾರ್ಗದ ಅಭಿವೃದ್ಧಿ ಹಾಗೂ ಸುಂದರಿಕರಣದ ಬಗ್ಗೆ ಪ್ರಸ್ಥಾವನೆಗಳನ್ನು ಹಾಗೂ ಸಲಹೆಗಳನ್ನು ತಿಳಿಸುವಂತೆ ಕೋರಿದರು.**



Scanned with CamScanner

1. **ಘನತ್ಯಾಜ್ಯ ನಿರ್ವಹಣೆ ಬಗ್ಗೆ.**

ಸಭೆಗೆ ಹಾಜರಿದ್ದ ಶ್ರೀ ಸತೀಶ್ ಜಾದವ್ ರವರು ಮಾತನಾಡಿ ಬಿ.ಟಿ.ಎಂ 2ನೇ ಹಂತದ ವ್ಯಾಪ್ತಿಯಲ್ಲಿರುವ 29ನೇ ಮುಖ್ಯರಸ್ತೆ ಮತ್ತು 31ನೇ ಮುಖ್ಯರಸ್ತೆಯ ಪಾದಚಾರಿ ಮಾರ್ಗದಲ್ಲಿ ಕಸವಿದ್ದು ಮತ್ತು ಕಸಕ್ಕೆ ಬೆಂಕಿ ಹಾಕುತ್ತಿದ್ದು ಸೂಕ್ತ ಕ್ರಮ ವಹಿಸುವಂತೆ ಕೋರಿದರು.

**ಹಾಜರಿದ್ದ ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ಕೂಡಲೇ ಕ್ರಮವಹಿಸುವುದಾಗಿ ತಿಳಿಸಿದರು.**

**2021-22ನೇ ಸಾಲಿನ ಆಯವ್ಯಯದಲ್ಲಿ 29ನೇ ಮುಖ್ಯರಸ್ತೆಯಲ್ಲಿ ಹೊಸ ಶೌಚಲಯ ನಿರ್ಮಿಸಿಕೊಡುವಂತೆ ಕೇಳಿದರು.**

2. **ಅರಣ್ಯ ಇಲಾಖೆಯ ಬಗ್ಗೆ.**

ಸಭೆಗೆ ಹಾಜರಿದ್ದ ಶ್ರೀಮತಿ ಮಂಜುಳ ಶ್ರೀಧರ್ ರವರು ಮಾತನಾಡಿ ಸೂಕ್ತ ಅನುಮತಿಯನ್ನು ಪಡೆದು ಮರಗಳನ್ನು ಮತ್ತು ಮರದ ಕೊಂಬೆಗಳನ್ನು ತೆರವುಗೊಳಿಸಬೇಕೆಂದು ಅಗ್ರಹಿಸಿದರು ಹಾಗೂ ಕತ್ತರಿಸಿದ ಮರದ ಕೊಂಬೆಗಳನ್ನು ತೆರವುಗೂಳಿಸಲು ಕೋರಿದರು.

ಈ ಬಗ್ಗೆ ಸಂಬಂದಿಸಿದ ಅರಣ್ಯ ಇಲಾಖೆರವರಿಗೆ ತಿಳಿಸುವುದಾಗಿ ಕಾರ್ಯದರ್ಶಿರವರು ತಿಳಿಸಿದರು.

3. **ಕಂದಾಯ ಇಲಾಖೆ ಬಗ್ಗೆ.**

ಕಾರ್ಯದರ್ಶಿ ರವರು ಮಾತನಾಡಿ ಖಾಲಿ ನಿವೇಶನಗಳಿಗೆ ವಿಧಿಸುವ ದಂಡವನ್ನು ಅವರ ತೆರಿಗೆಯಲ್ಲಿ ವಸೂಲಿ ಮಾಡುವಂತೆ ಕೋರಿದರು ಈ ಬಗ್ಗೆ ಕಂದಾಯ ಪರಿವೀಕ್ಷಕರು ಮಾತನಾಡಿ ಸೂಕ್ತ ಕ್ರಮ ಜರುಗಿಸುವುದಾಗಿ ಸೂಚಿಸಿದರು.

4. **ಯೋಜನೆ ವಿಭಾಗ (ವೈಟ್ ಟಾಪ್ಪಿಂಗ್ ಸೆಂಟ್ರಲ್ – 8)**

ಈ ಹಿಂದೆ ಸಭೆಗೆ ಹಾಜರಿದ್ದ ಶ್ರೀ. ಸಲಹುದ್ದಿನ್ ನಾಗರೀಕರು ಮತ್ತು ಶ್ರೀ ಸತೀಶ್ ಜಾದವ್ ಅಧ್ಯಕ್ಷರು ಸನ್‌ಶೈನ್ ಕಾಲೋನಿ ರವರು ಮಾತನಾಡಿ 29ನೇ ಮುಖ್ಯರಸ್ತೆಯ ಪಾದಚಾರಿ ಮಾರ್ಗವು ಕೆಲವು ಕಡೆಗಳಲ್ಲಿ ಸುಮಾರು 1 ಅಡಿ ಎತ್ತರವಿದ್ದು ಪಾದಚಾರಿಗಳು ಒಡಾಡುವುದು ಕಷ್ಟವಾಗಿದ್ದು ಕೂಡಲೇ ಸೂಕ್ತ ಕ್ರಮವಹಿಸಲು ಕೋರಿದ್ದರು ಅದರಂತೆ ಸಂಭಂದಿಸಿದ ಅಭಿಯಂತರರಿಗೆ ತಮ್ಮ ದೂರಿನ ಬಗ್ಗೆ ತಿಳಿಸಿದ್ದು ಸದರಿಯವರು ತಿಳಿಸಿರುವ ವಿಷಯವನ್ನು ಕಾರ್ಯದರ್ಶಿ ರವರು ಶ್ರೀ ಸತೀಶ್ ಜಾದವ್ ಅಧ್ಯಕ್ಷರು ಸನ್‌ಶೈನ್ ಕಾಲೋನಿ ರವರಿಗೆ ತಿಳಿಸಿದರು.

**ಈ ಮೇಲ್ಕಂಡ ಎಲ್ಲಾ ವಿಷಯಗಳನ್ನು ಹಾಗೂ ಸಮಸ್ಯೆಗಳನ್ನು ಬರುವ ಮುಂದಿನ ಸಭೆಯೊಳಗಾಗಿ ನಿವಾರಣೆ ಮಾಡಿ ಅನುಪಾಲನೆ ವರದಿಯನ್ನು ಸಂಬಂಧಪಟ್ಟ ಅಧಿಕಾರಿಗಳು ಕಳುಹಿಸಿಕೊಡಬೇಕಾಗಿ ಈ ಮೂಲಕ ಸೂಚಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.**

(sd) 24/2/2024

ಕಾರ್ಯದರ್ಶಿಗಳು,

ವಾರ್ಡ್ ಸಂಖ್ಯೆ:176, ಬಿ.ಟಿ.ಎಂ ಬಡಾವಣೆ

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

**ಪ್ರತಿಯನ್ನು:**

1. ಮಾನ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಘನತ್ಯಾಜ್ಯ) ರವರ ಅವಗಾಹನೆಗೆ ಸಲ್ಲಿಸಿದೆ.
4. ಜಂಟಿ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
5. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
6. ಅಧೀಕ್ಷಕ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ಕಾರ್ಯಪಾಲಕ ಅಭಿಯಂತರರು, ಬಿ.ಟಿ.ಎಂ.ಲೇಔಟ್ ವಿಭಾಗರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಮುಂದಿನ ಕ್ರಮಕ್ಕೆ
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲಮಂಡಳಿ, ಬಿ.ಟಿ.ಎಂ ರವರಿಗೆ ಮುಂದಿನ ಕ್ರಮಕ್ಕೆ



Scanned with CamScanner